ಇ) ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಧಾರವಾಡ ಜಿಲ್ಲೆಯಲ್ಲಿ 8 ಯುನಿಟ್‌ಗಳು, ಗದಗ ಜಿಲ್ಲೆಯಲ್ಲಿ 3 ಯುನಿಟ್‌ಗಳು ಹಾವೇರಿ ಜಿಲ್ಲೆಯಲ್ಲಿ 6 ಯುನಿಟ್‌ಗಳ ಕಾಮಗಾರಿಗಳು ಬಾಕಿ ಇರುತ್ತವೆ.

ಕರ್ನಾಟಕ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ಧಾರವಾಡ ಜಿಲ್ಲೆಯಲ್ಲಿ 22 ಯುನಿಟ್‌ಗಳು ಗದಗ ಜಿಲ್ಲೆಯಲ್ಲಿ 1 ಯುನಿಟ್ ಹಾಗೂ ಹಾವೇರಿ ಜಿಲ್ಲೆಯ್ಲಿಲ 10 ಯುನಿಟ್‌ಗಳ ಕಾಮಗಾರಿಗಳು ಬಾಕಿ ಉಳಿದಿದೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಲ್ಲಿ ಕೊಳವೆಬಾವಿ ಕೊರೆಯುವಿಕೆಯೇ ಬಾಕಿ ಉಳಿದಿದೆ.

ಹುಬ್ಬಳ್ಳಿ - ಧಾರವಾಡ ನಗರ ಪಾಲಿಕೆ ಅನುದಾನ ಬಿಡುಗಡೆ

804 (866) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 9ನೇ ಹಣಕಾಸು ಆಯೋಗದ ಹಾಗೂ 10ನೇ ಹಣಕಾಸು ಆಯೋಗದನ್ವಯ ಹುಬ್ಬಳ್ಳಿ-ಧಾರವಾಡ ಮಹಾನಗರಪಾಲಿಕೆಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ;

ಆ) ಮಂಜೂರಾದ ಹಣ ಈವರೆಗೆ ಬಿಡುಗಡೆ ಮಾಡಲಾಗಿದೆಯೇ ಅಥವಾ ಇಲ್ಲವೇ;

ಇ) ಇಲ್ಲವಾದಲ್ಲಿ ಕಾರಣಗಳೇನು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) 9ನೇ ಹಣಕಾಸು ಆಯೋಗದ ಅಡಿಯಲ್ಲಿ ಯಾವುದೇ ನಗರಸಭೆ ಹಾಗೂ ಮಹಾನಗರಪಾಲಿಕೆಗೆ ಹಣ ಬಿಡುಗಡೆ ಮಾಡಿರುವುದಿಲ್ಲ. 10ನೇ ಹಣಕಾಸು ಆಯೋಗದ ಅಡಿಯಲ್ಲಿ 1996-97 ರಿಂದ 2000-2001ನೇ ಅವಧಿಯಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರಪಾಲಿಕೆಗೆ ರೂ. 1,87,25,000-00ಗಳನ್ನು ಬಿಡುಗಡೆ ಮಾಡಲಾಗಿದೆ.

ಆ) ಮಂಜೂರು ಮಾಡಲಾದ ಹಣವನ್ನು ಮಹಾನಗರಪಾಲಿಕೆಗೆ ಈಗಾಗಲೇ ಬಿಡುಗಡೆ ಮಾಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ಕೆ.ಎಸ್.ಎಸ್.ಐ.ಡಿ.ಸಿ. ಯಿಂದ ನೀಡಲಾದ ಸಾಲ

805 (867) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಎಸ್.ಎಸ್.ಐ.ಡಿ.ಸಿ. ಯಿಂದ ಕಳೆದ 3 ವರ್ಷಗಳಲ್ಲಿ ಎಷ್ಟು ಸಾಲ ನೀಡಲಾಗಿದೆ; ಹತ್ತು ಲಕ್ಷ ರೂ.ಗಳಿಗಿಂತ ಹೆಚ್ಚು ಮೊತ್ತದ ಸಾಲದ ವಿವರಣೆ ನೀಡುವುದು?

ಆ) ಕಳೆದ ವರ್ಷಗಳಲ್ಲಿ ಎಷ್ಟು ಸಾಲ ಮರು ಪಾವತಿ ಆಗಿದೆ?

ಇ) ಫ್ಲೋರಿಕಲ್ಚರ್ ಉದ್ಯಮಕ್ಕೆ ಎಷ್ಟು ಸಾಲ ನೀಡಲಾಗಿದೆ; ಮರುಪಾವತಿ ಪ್ರಮಾಣ ಎಷ್ಟು?

ಈ) ಸಾಲದ ಮರುಪಾವತಿ ಮಾಡದವರ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಉ) ಫ್ಲೋರಿಕಲ್ಚರ್‌ಗೆ ಸಾಲ ನೀಡುವುದನ್ನು ನಿಲ್ಲಿಸಲಾಗಿದೆಯೇ; ಹಾಗಿದ್ದಲ್ಲಿ ಕಾರಣಗಳೇನು?

ಊ) ಕೆ.ಎಸ್.ಎಸ್.ಐ.ಡಿ.ಸಿ. ಯ ಸಹಾಯದಿಂದ ಪ್ರಾರಂಭವಾದ ಎಷ್ಟು ಕೈಗಾರಿಕೆಗಳು ಲಾಭದಾಯಕವಾಗಿದೆ; ಎಷ್ಟು ಆರೋಗ್ಯಕರವಾಗಿ ಕೆಲಸ ನಿರ್ವಹಿಸುತ್ತಿದೆ; ಎಷ್ಟು ಉದ್ಯೋಗಾವಕಾಶ ಲಭಿಸಿದೆ?

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ನಿ)ದಲ್ಲಿ ಸಾಲ ಕೊಡುವ ಯೋಜನೆಗಳಿರುವುದಿಲ್ಲ .

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಊ) ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ(ನಿ)ವು ಕೈಗಾರಿಕೆಗಳ ಅಭಿವೃದ್ಧಿ ನಿಗಮ(ನಿ)ವು ಕೈಗಾರಿಕಾ ವಸಾಹತುಗಳನ್ನು ಅಭಿವೃದ್ಧಿಪಡಿಸಿ ನಿವೇಶನ/ಮಳಿಗೆಗಳನ್ನು ಹಂಚಿಕೆ ಮಾಡುತ್ತಿದೆ. ಈವರೆಗೆ 8621 ಉದ್ದಿಮೆದಾರರಿಗೆ ಹಂಚಿಕೆ ಮಾಡಲಾಗಿದೆ.

ವಿಶೇಷ ಘಟಕ ಯೋಜನೆಯಡಿ ಖರ್ಚು ಮಾಡಿದ ಹಣ

806 (1020) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಶೇಷ ಘಟಕ ಯೋಜನೆಯಡಿ ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಹಣ ಹಾಗೂ ಖರ್ಚು ಮಾಡಿದ ಹಣ ಎಷ್ಟು; ಜಿಲ್ಲಾವಾರು ವಿವರ ನೀಡುವುದು.

ಆ) ವಿಶೇಷ ಘಟಕ ಯೋಜನೆಯಡಿ ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು? ಖರ್ಚು ಮಾಡಿರುವ ಹಣ ಎಷ್ಟು? ಜಿಲ್ಲಾವಾರು ವಿವರ ನೀಡುವುದು.